**All India Radio: Bangalore**
**Regional Bulletin In Kannada**
**03.07.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**03.07.2025 / 6.40 p.m.**
**<><><><>**

ಮುಖ್ಯಾಂಶಗಳು

೧. ರಾಜ್ಯಾದ್ಯಂತ ೩೯೩ ಕಡೆ ಆಶಾಕಿರಣ ದೃಷ್ಟಿಕೇಂದ್ರ ; ಜನರಿಗೆ ಉಚಿತ ಚಿಕಿತ್ಸೆ, ಕನ್ನಡಕ ವಿತರಣೆಗೆ ನಿರ್ಧಾರ

೨. ಚಾಮರಾಜಪೇಟೆಯ ಟಿಆರ್ ಮಿಲ್ಸ್‌ನಲ್ಲಿ ೬ ಎಕರೆ ಭೂಸ್ವಾದೀನ ಅಧಿಸೂಚನೆ ರದ್ದುಗೊಳಿಸಿದ ಹೈಕೋರ್ಟ್

೩. ಕೋವಿಡ್ ಲಸಿಕೆ ಹಾಗೂ ಹಠಾತ್ ಹೃದಯಾಘಾತಕ್ಕೆ ಯಾವುದೇ ಸಂಬಂಧವಿಲ್ಲ ; ಏಮ್ಸ್ ಪುನರುಚ್ಚಾರ

೪. ತುಮಕೂರಿನಲ್ಲಿ ರೈಲ್ವೆ ಮೇಲ್ಸೇತುವೆ ನಿರ್ಮಾಣ ಕಾಮಗಾರಿಗೆ ಕೇಂದ್ರ ಸಚಿವ ವಿ. ಸೋಮಣ್ಣ ಚಾಲನೆ

೫. ಸರ್ಕಾರದ ಮುಖ್ಯ ಕಾರ್ಯದರ್ಶಿ ವಿರುದ್ಧ ಹೇಳಿಕೆ ; ಬಿಜೆಪಿ ಪರಿಷತ್ ಸದಸ್ಯ ರವಿಕುಮಾರ್ ವಿರುದ್ಧ ಸಚಿವೆ ಲಕ್ಷ್ಮೀಹೆಬ್ಬಾಳ್ಕರ್ ಅಸಮಾಧಾನ

**<><><><>**

"ಜನರ ಕಣ್ಣು, ದೃಷ್ಟಿಗೆ ತೊಂದರೆ ಬಂದರೆ ಚಿಕಿತ್ಸೆ ನೀಡುವ ದೃಷ್ಟಿ ಗ್ಯಾರಂಟಿಯನ್ನು ಆಶಾಕಿರಣ ಯೋಜನೆ ಮೂಲಕ ಸರ್ಕಾರ ನೀಡುತ್ತಿದೆ" ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನ ಬಾಲಗಂಗಾಧರನಾಥ ಸ್ವಾಮೀಜಿ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಆಶಾಕಿರಣ ದೃಷ್ಟಿ ಕೇಂದ್ರ ಉದ್ಘಾಟಿಸಿ ಮಾತನಾಡಿದ ಅವರು, "ರಾಜ್ಯದಾದ್ಯಂತ ೩೯೩ ಕಡೆ ಆಶಾಕಿರಣ ದೃಷ್ಟಿ ಕೇಂದ್ರಗಳ ಉದ್ಘಾಟನೆಯಾಗುತ್ತಿದೆ. ಉಚಿತವಾಗಿ ಕನ್ನಡಕ ನೀಡಲಾಗುತ್ತಿದ್ದು, ಜನರಿಗೆ ಇದರಿಂದ ಚಿಕಿತ್ಸೆಯ ಸಾವಿರಾರು ಮೊತ್ತ ಹಣ ಉಳಿಯುತ್ತದೆ ಎಂದು ತಿಳಿಸಿದ್ದಾರೆ. ಇದೇ ವೇಳೆ ಯೋಜನೆಯ ಲಾಭ ಪಡೆದವರಿಗೆ ಉಚಿತ ಕನ್ನಡಕಗಳನ್ನು ವಿತರಣೆ ಮಾಡಿದರು.

<><><><>

ಬೆಂಗಳೂರಿನ ಚಾಮರಾಜಪೇಟೆಯ ಟಿ.ಆರ್.ಮಿಲ್ಸ್‌ನ ಚಂದ್ರ ಸ್ಪಿನಿಂಗ್ ಮಿಲ್ಸ್ ಜಾಗದಲ್ಲಿ ಕೊಳಗೇರಿ ನಿವಾಸಿಗಳಿಗೆ ಪನರ್ ವಸತಿ ಕಲ್ಪಿಸಿಕೊಡಲು ಸರ್ಕಾರ ಆರು ಎಕರೆ ಭೂಮಿ ಸ್ವಾಧೀನಕ್ಕೆ ಹೊರಡಿಸಿದ ಅಧಿಸೂಚನೆಯನ್ನು ರದ್ದುಗೊಳಿಸಿ ಹೈಕೋರ್ಟ್ ಆದೇಶ ಹೊರಡಿಸಿದೆ. ಇಪ್ಪತ್ತು ವರ್ಷಗಳ ಸುದೀರ್ಘವಾದ ಕಾನೂನು ಹೋರಾಟದ ನಂತರ ಹೈಕೋರ್ಟ್ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ನೇತೃತ್ವದ ಏಕ ಸದಸ್ಯ ಪೀಠ ಕೊಳಚೆ ಕರ್ನಾಟಕರದ ಅಧಿಸೂಚನೆ ರದ್ದುಗೊಳಿಸಿ ಆದೇಶ ಹೊರಡಿಸಿದೆ. ಭೂಸ್ವಾದೀನಮಾಡಿಕೊಳ್ಳುವುದು ತಪ್ಪಲ್ಲ, ಆದರೆ ಮಾರುಕಟ್ಟೆ ಮೌಲ್ಯದ ಪ್ರಕಾರ ಭೂ ಪರಿಹಾರ ನಿಗದಿ ಪಡಿಸಬೇಕು ಎಂದು ಆದೇಶ ನೀಡಿದೆ. ಸರ್ಕಾರದ ಭೂಸ್ವಾಧೀನ ಅಧಿಸೂಚನೆ ರದ್ದುಪಡಿಸುವಂತೆ ಮನವಿಮಾಡಿ ಚಂದ್ರ ಸ್ಪಿನಿಂಗ್ ಅಂಡ್ ವಿವಿಂಗ್ ಮಿಲ್ಸ್ ನಿರ್ದೇಶಕರು ಹಾಗೂ ಇತರರು ಹೈಕೋರ್ಟ್ ಗೆ ಅರ್ಜಿ ಸಲ್ಲಿಸಿದ್ದರು.

<><><><>

ಕೋವಿಡ್ ಲಸಿಕೆಗಳು ಮತ್ತು ಹಠಾತ್ ಹೃದಯಾಘಾತದ ಸಾವುಗಳ ನಡುವೆ ಯಾವುದೇ ಸಂಬಂಧ ಕಂಡು ಬಂದಿಲ್ಲ ಎಂದು ದೆಹಲಿಯ ಅಖಿಲ ಭಾರತ ವೈದ್ಯಕೀಯ ವಿಜ್ಞಾನ ಸಂಸ್ಥೆ - ಏಮ್ಸ್ ಪುನರುಚ್ಚರಿಸಿದೆ. ಈ ಕುರಿತು ನವದೆಹಲಿಯಲ್ಲಿಂದು ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದ ಏಮ್ಸ್‌ನ ಪ್ರೋಫೆಸರ್ ಡಾ. ಕರಣ್ ಮದನ್, ಕೋವಿಡ್ ಲಸಿಕೆಗಳು ಪರಿಣಾಮಾಕಾರಿಯಾಗಿದ್ದು, ಮರಣ ಪ್ರಮಾಣವನ್ನು ತಗ್ಗಿಸುವಲ್ಲಿ ನಿರ್ಣಾಯಕ ಪಾತ್ರವಹಿಸಿದ್ದವು ಎಂದು ಹೇಳಿದ್ದಾರೆ. ದೆಹಲಿ ಏಮ್ಸ್ ಹೃದ್ರೋಗ ವಿಭಾಗದ ಮುಖ್ಯಸ್ಥ ಡಾ. ರಾಜೀವ್ ನಾರಂಗ್ ಮಾತನಾಡಿ, ಎರಡು ಡೋಸ್ ಲಸಿಕೆ ಪಡೆದವರ ಹಠಾತ್ ಸಾವಿನ ಸಾದ್ಯತೆಯ ಪ್ರಮಾಣ ಶೇಕಡ ೫೦ರಷ್ಟು ತಗ್ಗಿತ್ತು ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ಹೃದಯಘಾತ ಹೆಚ್ಚುತ್ತಿರುವುದಕ್ಕೆ ಕೋವಿಡ್ ಲಸಿಕೆ ಕಾರಣವಿರಬಹುದು ಎಂಬ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿಕೆಯನ್ನು ಬಯೋ ಕಂಪನಿ ಮುಖ್ಯಸ್ಥೆ ಕಿರಣ್ ಮಜುಂದಾರ್ ಖಂಡಿಸಿದ್ದಾರೆ. ಇದು ವಾಸ್ತವಕ್ಕೆ ವಿರುದ್ಧವಾಗಿದ್ದು, ದಾರಿ ತಪ್ಪಿಸುವಂತಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ. ಭಾರತದಲ್ಲಿ ಅಭಿವೃದ್ಧಿಪಡಿಸಲಾದ ಕೋವಿಡ್-೧೯ ಲಸಿಕೆಗಳನ್ನು ತುರ್ತು ಬಳಕೆಗಾಗಿ ಅನುಮೋದಿಸಲಾಗಿದೆ. ಲಸಿಕೆಯ ಸುರಕ್ಷತೆ ಮತ್ತು ಪರಿಣಾಮಕಾರಿತ್ವದ ವಿಷಯದಲ್ಲಿ ಜಾಗತಿಕ ಮಾನದಂಡಗಳನ್ನು ಅನುಸರಿಸಲಾಗಿದೆ. ಕೋವಿಡ್ ಲಸಿಕೆ ಲಕ್ಷಾಂತರ ಜೀವಗಳನ್ನು ಉಳಿಸಿದೆ ಎಂದು ಸಮರ್ಥಿಸಿಕೊಂಡಿದ್ದಾರೆ.

<><><><>

ತುಮಕೂರು ಜಿಲ್ಲೆ ಗುಬ್ಬಿ ತಾಲೂಕಿನ ನಂದಿಹಳ್ಳಿ ಗೇಟ್ ಬಳಿ ರೈಲ್ವೆ ಮೇಲ್ಸೇತುವೆ ನಿರ್ಮಾಣ ಕಾಮಗಾರಿಗೆ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಇಂದು ಶಂಕುಸ್ಥಾಪನೆ ನೆರವೇರಿಸಿದರು. ಇನ್ನೊಂದೆಡೆ ಬೆಣಚಗೆರೆ ಬಳಿ ರೈಲ್ವೆ ಮೇಲ್ಸೇತುವೆ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿದರು. ಕಳ್ಳಿಪಾಳ್ಯ ಬಳಿ ಮೇಲ್ಸುತುವೆ ನಿರ್ಮಾಣ ಸ್ಥಳ ಪರಿಶೀಲಿಸಿದ ಸಚಿವರು, ಕಾಲಮಿತಿಯಲ್ಲಿ ಕಾಮಗಾರಿ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಬಳಿಕ ಮಾತನಾಡಿದ ಅವರು, ರೈಲ್ವೆ ಮೇಲ್ಸೇತುವೆ ಹಾಗೂ ಕೆಳ ಸೇತುವೆ ನಿರ್ಮಾಣ ಕಾಮಗಾರಿಗಳನ್ನು ಒಂದೂವರೆ ವರ್ಷದಲ್ಲಿ ಪೂರ್ಣಗೊಳಿಸಲಾಗುವುದು ಎಂದು ತಿಳಿಸಿದರು. ಕೆಂಕೆರೆ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಹಾದುಹೋಗಲಿರುವ ಭಾರತಮಾಲಾ ಪರಿಯೋಜನೆಯಡಿ ೪-ಪಥಗಳ ಗ್ರೀನ್‌ಫೀಲ್ಡ್ ಹೆದ್ದಾರಿ ಯೋಜನೆಯಡಿ ಭೂಸ್ವಾಧೀನಪಡಿಸಿಕೊಂಡಿರುವ ರೈತರ ಭೂಮಿಗೆ ಶೀಘ್ರ ಪರಿಹಾರ ನೀಡಲಾಗುವುದು ಎಂದು ಹೇಳಿದರು. ಈ ಬಗ್ಗೆ ಗಮನ ಹರಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಗ್ರಾಮಸ್ಥರಿಗೆ ಭರವಸೆ ನೀಡಿದ್ದಾರೆ.

<><><><>

ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಕುರಿತು ಅವಹೇಳನಕಾರಿ ಹೇಳಿಕೆ ನೀಡಿರುವ ಬಿಜೆಪಿಯ ವಿಧಾನ ಪರಿಷತ್ ಸದಸ್ಯ ರವಿ ಕುಮಾರ್ ವಿರುದ್ಧ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ

ಹೆಬ್ಬಾಳ್ಕರ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ರಾಜ್ಯದಲ್ಲಿ ಬಿಜೆಪಿ ನಾಯಕರಿಂದ ಮಹಿಳೆಯರ ನಿಂದನೆ ನಿರಂತರವಾಗಿ ನಡೆಯುತ್ತಿದೆ. ರವಿ ಕುಮಾರ್ ಸಮಸ್ತ ಮಹಿಳಾ ಕುಲಕ್ಕೆ ಮಾಡಿರುವ ಅವಮಾನ ಇದಾಗಿದೆ. ರವಿಕುಮಾರ್ ಅವರ ಹೇಳಿಕೆಯನ್ನು ಕೇಂದ್ರ ಬಿಜೆಪಿ ನಾಯಕರು ಸಮರ್ಥಿಸಿಕೊಳ್ಳುವರೇ ಎಂದು ಪ್ರಶ್ನಿಸಿದ್ದಾರೆ. ಸಾರ್ವಜನಿಕವಾಗಿ ಮಹಿಳಾ ಅಧಿಕಾರಿ ಬಗ್ಗೆ ಕೆಟ್ಟದಾಗಿ ಮಾತನಾಡಿರುವ ರವಿ ಕುಮಾರ್ ಕೂಡಲೇ ಕ್ಷಮೆಯಾಚಿಸಬೇಕು ಎಂದು ಆಗ್ರಹಿಸಿದ್ದಾರೆ.

<><><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿ ಬಾರಿ ತಾವೇ ಮುಖ್ಯಮಂತ್ರಿ ಎಂದಾಗ ಅನುಮಾನ ಹೆಚ್ಚಾಗುತ್ತಿದೆ ಎಂದು ಮಾಜಿ ಮುಖ್ಯಮಂತ್ರಿ, ಸಂಸದ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ. ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಒಳ ಜಗಳದಿಂದ ರಾಜ್ಯದಲ್ಲಿ ಅಭಿವೃದ್ಧಿ ಶೂನ್ಯ ಎಂದು ಆರೋಪಿಸಿದ್ದಾರೆ. ರಾಜ್ಯದಲ್ಲಿ ಇನ್ನು ೬ ತಿಂಗಳಲ್ಲಿ ವಿಧಾನಸಭಾ ಚುನಾವಣೆ ನಡೆಯಲಿದೆ ಎಂದು ತಿಳಿಸಿದ್ದಾರೆ. ಇದೇ ವೇಳೆ, ರಾಜ್ಯ ಬಿಜೆಪಿಯಲ್ಲಿ ಯಾವುದೇ ಗೊಂದಲವಿಲ್ಲ. ಬಿಜೆಪಿ ರಾಜ್ಯಾಧ್ಯಕ್ಷ ನೇಮಕವನ್ನು ಕೇಂದ್ರೀಯ ನಾಯಕರು ನಿರ್ಧರಿಸಲಿದ್ದಾರೆ ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ಆಟಲ್ ಜೀ ಜನಸ್ನೇಹಿ ಕೇಂದ್ರ ಯೋಜನೆಯಡಿ ಕೋಲಾರ ಜಿಲ್ಲೆಯ ನಾಡಕಚೇರಿಗಳಲ್ಲಿ ಶೇಕಡ ೯೯ರಷ್ಟು ಅರ್ಜಿಗಳನ್ನು ನಿಗದಿತ ಅವಧಿಗಿಂತ ಮೊದಲೇ ವಿಲೇವಾರಿ ಮಾಡಿ, ಕೋಲಾರ ಜಿಲ್ಲೆ ಮತ್ತೊಮ್ಮೆ ರಾಜ್ಯದಲ್ಲಿ ಪ್ರಥಮ ಸ್ಥಾನ ಗಳಿಸಿದೆ ಎಂದು ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ತಿಳಿಸಿದ್ದಾರೆ. ೨೦೨೫ರ ಜೂನ್ ತಿಂಗಳಿನಲ್ಲಿ  ಒಟ್ಟು ೧೦ ಸಾವಿರದ ೭೪೭ ಅರ್ಜಿಗಳನ್ನು ಸಾರ್ವಜನಿಕರಿಂದ ಸ್ವೀಕರಿಸಿ, ೧೦ ಸಾವಿರದ ೭೪೬ ಅರ್ಜಿಗಳ ವಿಲೇವಾರಿ ಮಾಡಲಾಗಿದೆ. ಕೋಲಾರ ಜಿಲ್ಲೆ ೭.೭೮ 'ಸಿಗ್ಮಾ ಮೌಲ್ಯ'ವನ್ನು ಪಡೆಯುವ ಮೂಲಕ ಗರಿಷ್ಠ ೮.೫೩ ವಿಲೇವಾರಿ ಸೂಚ್ಯಂಕವನ್ನು ಗಳಿಸಿದೆ.

<><><><>

ಭಾರತೀಯ ಮಾಹಿತಿ ತಂತ್ರಜ್ಞಾನ ಸಂಸ್ಥೆ - ಐಐಐಟಿಯ ೭ನೇ ಘಟಿಕೋತ್ಸವ ನಾಳೆ ಧಾರವಾಡ ಐಐಐಟಿ ಆವರಣದಲ್ಲಿ ನಡೆಯಲಿದೆ. ಐಐಐಟಿ ನಿರ್ದೇಶಕ ಡಾ. ಎಸ್.ಆರ್. ಮಹಾದೇವ ಪ್ರಸನ್ನ ಈ ವಿಷಯ ತಿಳಿಸಿದ್ದಾರೆ. ಸಮಾರಂಭದ ಮುಖ್ಯ ಅತಿಥಿಗಳಾಗಿ ಸಿಎಸ್ಐಆರ್ ಡೈರೆಕ್ಟರ್ ಜನರಲ್ ಹಾಗೂ ಡಿಎಸ್ಐಆರ್ ನ ಸೆಕ್ರೆಟರಿ ಎನ್. ಕಲೈಸೆಲ್ವಿ, ಐಐಐಟಿ ಆಡಳಿತ ಮಂಡಳಿ ಅಧ್ಯಕ್ಷ ಡಾ. ಶ್ರೀಧರ ವೆಂಬು, ಐಐಐಟಿ ಕುಲಸಚಿವ ಪ್ರೊ. ಮುರುಗನಂತಮ್ ಪೊನ್ನುಸಾಮಿ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಈ ವರ್ಷದ ಘಟಿಕೋತ್ಸವದಲ್ಲಿ ಒಟ್ಟು ೨೫೭ ವಿದ್ಯಾರ್ಥಿಗಳಿಗೆ ಪದವಿ ಮತ್ತು ಓರ್ವ ಪಿಎಚ್‌ಡಿ ವಿದ್ಯಾರ್ಥಿಗೆ ಪದವಿ ಪ್ರದಾನ ಮಾಡಲಾಗುವುದು ಎಂದು ತಿಳಿಸಿದ್ದಾರೆ.

<><><><>

ಸಂಕ್ಷಿಪ್ತ ಸುದ್ದಿಗಳು-೧

೧. ಕೇಂದ್ರ ಸರ್ಕಾರದ ವಿಶೇಷ ಅನುದಾನದ ಅಡಿಯಲ್ಲಿ ಉತ್ತರಕನ್ನಡ ಲೋಕಸಭಾ ಕ್ಷೇತ್ರದಲ್ಲಿ ೩೩೦ ಗ್ರಾಮ ಗ್ರಂಥಾಲಯ ಮಂಜೂರಾಗಿದೆ ಎಂದು ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ತಿಳಿಸಿದ್ದಾರೆ.

೨. ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ೨೫ನೇ ವಾರ್ಷಿಕ ಘಟಿಕೋತ್ಸವ ನಾಳೆ ನಡೆಯಲಿದ್ದು, ರಾಜ್ಯಪಾಲ ಥಾವರ್ ಚಂದ ಗೆಹ್ಲೋಟ್ ಚಾಲನೆ ನೀಡಲಿದ್ದಾರೆ.

೩. ನಗರಾಭಿವೃದ್ಧಿ ಪ್ರಾಧಿಕಾರ ಹಾಗೂ ಮಹಾನಗರ ಪಾಲಿಕೆಗಳ ಪರವಾನಿಗೆ ಪಡೆಯದೇ ಅನಧಿಕೃತವಾಗಿ ನಿರ್ಮಾಣ ಮಾಡಿದ ತುಂಡು ಜಮೀನ ಅಭಿವೃದ್ಧಿ ಪಡಿಸುತ್ತಿರುವುದನ್ನು ಕಾರ್ಯಾಚರಣೆ ನಡೆಸಿ ತೆರವುಗೊಳಿಸಲಾಗಿದೆ ಎಂದು ವಿಜಯಪುರ ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತ ರಾಜಶೇಖರ ಡಂಬಳ ತಿಳಿಸಿದ್ದಾರೆ.

೪. ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಪ್ರಧಾನಮಂತ್ರಿ ಸೂರ್ಯಘರ್ ಯೋಜನೆಯಡಿ ಉಡುಪಿ ಜಿಲ್ಲೆಯಲ್ಲಿ ೫ ಗ್ರಾಮಗಳಾದ ಕೋಟತಟ್ಟು, ಕಿರಿಮಂಜೇಶ್ವರ, ಮಜೂರು, ನಿಟ್ಟೆ ಹಾಗೂ ಉಪ್ಪೂರು ಗ್ರಾಮಗಳನ್ನು ಆಯ್ಕೆ ಮಾಡಲಾಗಿದೆ. ಈ ಗ್ರಾಮಗಳಲ್ಲಿ ಸೋಲಾರ್ ಅಳವಡಿಕೆಯ ಬಗ್ಗೆ ಜುಲೈ ೧ ರಿಂದ ಡಿಸೆಂಬರ್ ಅಂತ್ಯದ ವರೆಗೆ ಸ್ಪರ್ಧೆಗಳನ್ನು ನಡೆಸಲು ಜಿಲ್ಲಾ ಮಟ್ಟದ ಸಭೆಯಲ್ಲಿ ತೀರ್ಮಾನಿಸಲಾಗಿದೆ ಎಂದು ಮೆಸ್ಕಾಂ ಇಲಾಖೆಯ ಕಚೇರಿ ಪ್ರಕಟಣೆ ತಿಳಿಸಿದೆ.

೫. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ಆವತಿಯ ಗೊಬ್ಬರಗುಂಟೆ ಗ್ರಾಮದ ಬಳಿ ನಾಡಪ್ರಭು ಕೆಂಪೇಗೌಡರ ವಸ್ತು ಸಂಗ್ರಹಾಲಯ ನಿರ್ಮಾಣಕ್ಕೆ ಉಪ ಮುಖ್ಯಮಂತ್ರಿ ಡಿಕೆ.ಶಿವಕುಮಾರ್ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್. ಮುನಿಯಪ್ಪ ಸ್ಥಳ ಪರಿಶೀಲನೆ ನಡೆಸಿದರು.

೬. ವಿಜಯಪುರದ ಇತಿಹಾಸ, ಪರಂಪರೆ, ಶಿಲ್ಪಕಲೆ ಮತ್ತು ಪ್ರವಾಸೋದ್ಯಮದ ಕುರಿತು ಜಿಲ್ಲಾಧಿಕಾರಿ ಟಿ.ಭೂಬಾಲನ್ ಪರಿಚಯ ನೀಡುವ ಮೂಲಕ ವಿಜಯಪುರ ಇತಿಹಾಸವನ್ನು ಥೈಲ್ಯಾಂಡ್‌ನ ಬಾಂಕ್‌ಕಾಕ್‌ನಲ್ಲಿ ಅನಾವರಣಗೊಳಿಸಿದ್ದಾರೆ.

<><><><>